ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ
"ಜ್ಞಾನ ಸಾಗರ" ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ - 583 105
VIJAYANAGARA SRI KRISHNADEVARAYA UNIVERSITY
"Jnana Sagara" Campus, Vinayaka Nagara, Cantonment, Ballari - 583 105

ಕುಲಸಚಿವರು
Registrar

e-mail: registrarps@vskub.ac.in
website: www.vskub.ac.in

ಸಂಖ್ಯೆ: ವಿಶ್ರೀಕೃವಿಬ/ಆಡಳಿತ/ಅ.ಉ–ನೇ/2025–26/1929 ದಿನಾಂಕ: 18-09-2025

## 2025–26ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ ಅರ್ಜಿ ಆಹ್ವಾನ

ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಮುಖ್ಯ ಆವರಣ ಹಾಗೂ ಸ್ನಾತಕೋತ್ತರ ಕೇಂದ್ರ, ನಂದಿಹಳ್ಳಿ (ಸಂಡೂರು ತಾಲ್ಲೂಕು) ಸ್ನಾತಕೋತ್ತರ ವಿಭಾಗಗಳಲ್ಲಿ ಅಗತ್ಯತೆಗನುಸಾರವಾಗಿ ಬೋಧನಾ ಕಾರ್ಯದ ನಿರ್ವಹಣೆಗಾಗಿ UGC ನಿಯಮಾನುಸಾರ ಪೂರ್ಣಕಾಲಿಕ/ಅರೆಕಾಲಿಕ ಅತಿಥಿ ಉಪನ್ಯಾಸಕರು, ಗ್ರಂಥಾಲಯ ವಿಭಾಗಗಳಲ್ಲಿ ಸಹಾಯಕ ಗ್ರಂಥಪಾಲಕರು ಹಾಗೂ ಕ್ರೀಡಾ ಮತ್ತು ದೈಹಿಕ ಶಿಕ್ಷಣ ವಿಭಾಗದಲ್ಲಿ ಸಹಾಯಕ ಕ್ರೀಡಾ ನಿರ್ದೇಶಕರು, CEMARF ಅತಿಥಿ ಉಪನ್ಯಾಸಕರು/ತಾಂತ್ರಿಕ ಸಹಾಯಕರು ಹುದ್ದೆಗಳಿಗಾಗಿ ವಿಷಯಗಳ ಬೋಧನಾ ಕಾರ್ಯಕ್ಕನುಗುಣವಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

### ಸ್ನಾತಕೋತ್ತರ ವಿಭಾಗಗಳು ಹಾಗೂ ಹುದ್ದೆಗಳ ವಿವರ

| ಕ್ರ.ಸಂ | ಸ್ನಾತಕೋತ್ತರ ವಿಭಾಗಗಳು | ಹುದ್ದೆಗಳ ಸಂಖ್ಯೆ |
|---|---|---|
| 01 | ಕನ್ನಡ ಅಧ್ಯಯನ ವಿಭಾಗ | 06 |
| 02 | ಪ್ರದರ್ಶನ/ನಾಟಕ ಅಧ್ಯಯನ ವಿಭಾಗ | 04 |
| 03 | ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗ | 03 |
| 04 | ಅರ್ಥಶಾಸ್ತ್ರ ಅಧ್ಯಯನ ವಿಭಾಗ | 01 |
| 05 | ಸಮಾಜಕಾರ್ಯ ಅಧ್ಯಯನ ವಿಭಾಗ | 05 |
| 06 | ಸಮೂಹ ಮಾಧ್ಯಮ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗ | 02 |
| 07 | ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗ | 01 |
| 08 | ಮಹಿಳಾ ಅಧ್ಯಯನ ವಿಭಾಗ | 02 |
| 09 | ರಸಾಯನಶಾಸ್ತ್ರ ಅಧ್ಯಯನ ವಿಭಾಗ | 08 |
| 10 | ಔದ್ಯೋಗಿಕ ರಸಾಯನಶಾಸ್ತ್ರ ಅಧ್ಯಯನ ವಿಭಾಗ | 04 |
| 11 | ಭೌತಶಾಸ್ತ್ರ ಅಧ್ಯಯನ ವಿಭಾಗ | 06 |
| 12 | ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗ | 04 |
| 13 | ಗಣಕ ವಿಜ್ಞಾನ ಅಧ್ಯಯನ ವಿಭಾಗ | -- |
| | 1. ಎಂ.ಎಸ್ಸಿ | 02 |
| | 2. ಮಾಸ್ಟರ್ ಆಫ್ ಕಂಪ್ಯೂಟರ್ ಅಪ್ಲಿಕೇಶನ್ಸ್ (ಎಂ.ಸಿ.ಎ) | 03 |
| 14 | ಸಸ್ಯಶಾಸ್ತ್ರ ಅಧ್ಯಯನ ವಿಭಾಗ | 02 |
| 15 | ಜೈವಿಕ ತಂತ್ರಜ್ಞಾನ ಅಧ್ಯಯನ ವಿಭಾಗ | 03 |
| 16 | ಸೂಕ್ಷ್ಮಜೀವಶಾಸ್ತ್ರ ಅಧ್ಯಯನ ವಿಭಾಗ | 03 |
| 17 | ಗಣಿತಶಾಸ್ತ್ರ ಅಧ್ಯಯನ ವಿಭಾಗ | 04 |
| 18 | ಖನಿಜ ಸಂಸ್ಕರಣ ಅಧ್ಯಯನ ವಿಭಾಗ | 03 |
| 19 | ಕಾನೂನು ಅಧ್ಯಯನ ವಿಭಾಗ | 02 |
| 20 | ಅನ್ವಯಿಕ ಭೂ ವಿಜ್ಞಾನ ಅಧ್ಯಯನ ವಿಭಾಗ | 03 |
| 21 | ದೈಹಿಕ ಶಿಕ್ಷಣ, ಕ್ರೀಡಾ ವಿಜ್ಞಾನ ಮತ್ತು ಯೋಗ ಅಧ್ಯಯನ ವಿಭಾಗ | 03 |
| 22 | ಸಹಾಯಕ ಗ್ರಂಥಪಾಲಕರು | 04 |
| 23 | ಸಹಾಯಕ ಕ್ರೀಡಾ ನಿರ್ದೇಶಕರು | 02 |
| 24 | CEMARF ಅತಿಥಿ ಉಪನ್ಯಾಸಕರು/ತಾಂತ್ರಿಕ ಸಹಾಯಕರು | 01 |
| | **ಒಟ್ಟು** | **81** |

**ಅಭ್ಯರ್ಥಿಗಳಿಗೆ ಸೂಚನೆ:**

- ಅತಿಥಿ ಉಪನ್ಯಾಸಕರನ್ನು U.G.C ಹಾಗೂ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿಗಳ ಪ್ರಕಾರ ನೇಮಕ ಮಾಡಲಾಗುವುದು.
- ಈ ಹುದ್ದೆಗಳು (ಪೂರ್ಣಕಾಲಿಕ/ಅರೆಕಾಲಿಕ) ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, 2025-26ನೇ ಶೈಕ್ಷಣಿಕ ಸಾಲಿಗೆ ಮಾತ್ರ ಸೀಮಿತವಾಗಿರುತ್ತವೆ. ಸದರಿ ಹುದ್ದೆಗಳು ಯಾವುದೇ ಮಂಜೂರಾದ ಹುದ್ದೆಗಳಿಗೆ ವಿರುದ್ಧವಾಗಿರುವುದಿಲ್ಲ ಮತ್ತು ಸೂಚಿಸಲಾದ ಹುದ್ದೆಗಳ ಸಂಖ್ಯೆಯು ತಾತ್ಕಾಲಿಕವಾಗಿದ್ದು, ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ನೇಮಿಸಿಕೊಳ್ಳಲಾಗುವುದು. (Against the workload but not against the sanctioned post)
- ಅಧಿಸೂಚನೆಯಲ್ಲಿ ಪ್ರಕಟಿಸಿದ ಹುದ್ದೆಗಳನ್ನು ಭರ್ತಿಮಾಡುವ ಅಥವಾ ಭರ್ತಿಮಾಡದೇ ಇರುವ ಅಧಿಕಾರವನ್ನು ವಿಶ್ವವಿದ್ಯಾಲಯವು ಕಾಯ್ದಿರಿಸಿದೆ.
- ಆಯ್ಕೆಯಾದ ಅಭ್ಯರ್ಥಿಗಳ ಸೇವೆಯು ತೃಪ್ತಿಕರವಾಗಿರದಿದ್ದಲ್ಲಿ ಯಾವುದೇ ಮುನ್ಸೂಚನೆ ನೀಡದೆ ಕೆಲಸದಿಂದ ತೆಗೆದುಹಾಕುವ ಅಧಿಕಾರ ವಿಶ್ವವಿದ್ಯಾಲಯ ಹೊಂದಿದೆ.
- ಸಂದರ್ಶನಕ್ಕೆ ಹಾಜರಾದ ಮಾತ್ರಕ್ಕೆ ಅಭ್ಯರ್ಥಿಗಳು ನೇಮಕಾತಿಯೆಂದು ಭಾವಿಸತಕ್ಕದ್ದಲ್ಲ.
- ಆಯ್ಕೆಯಾದ ಅಭ್ಯರ್ಥಿಗಳು ವಿಶ್ವವಿದ್ಯಾಲಯದ ಅಧೀನಕ್ಕೊಳಪಟ್ಟಿರುವ ಯಾವುದೇ ಸ್ನಾತಕೋತ್ತರ ಕೇಂದ್ರಗಳಲ್ಲಿ ಸೇವೆ ಸಲ್ಲಿಸಲು ಸಿದ್ಧವಿರಬೇಕು.
- ನಿಗದಿತ ಅರ್ಜಿ ನಮೂನೆಗಳು, ವಿವಿಧ ವಿಭಾಗಗಳ ವಿವರ ಹಾಗೂ ಇನ್ನಿತರೆ ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯದ ಅಂತರ್ಜಾಲ www.vskub.ac.in ನೋಡತಕ್ಕದ್ದು ಹಾಗೂ ಅರ್ಜಿಗಳನ್ನು ಡೌನ್‌ಲೋಡ್ ಮಾಡತಕ್ಕದ್ದು. ಭರ್ತಿ ಮಾಡಿದ ಅರ್ಜಿ, ನಿಗದಿತ ಶುಲ್ಕ ಮತ್ತು ಲಗತ್ತುಗಳೊಂದಿಗೆ ಶೈಕ್ಷಣಿಕ ಅರ್ಹತೆ, ಅನುಭವದ ವಿವರ, ಜಾತಿ, ವರ್ಗ ಪ್ರಮಾಣಪತ್ರಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಗೆಜೆಟೆಡ್ ಅಧಿಕಾರಿಯಿಂದ ದೃಢೀಕರಿಸಿದ ಪ್ರತಿಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಭರ್ತಿ ಮಾಡಿದ ಅರ್ಜಿಯೊಂದಿಗೆ ನಿಗದಿತ ಶುಲ್ಕದ ಮೂಲಪ್ರತಿಯ (Original Copy) ಚಲನ್ ಅಥವಾ DDಯನ್ನು ಹಣಕಾಸು ಅಧಿಕಾರಿಗಳು, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ ಇವರ ಹೆಸರಿನಲ್ಲಿ ಪಡೆದು ಲಗತ್ತಿಸಬೇಕು ಅಥವಾ ವಿಶ್ವವಿದ್ಯಾಲಯದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಖಾತೆ ಸಂಖ್ಯೆ: 3866101000001ಗೆ (IFSC: CNRB0003866) ಹಣ ಪಾವತಿಸಿದ ಚಲನ್‌ನ ಅಭ್ಯರ್ಥಿಯ ಪ್ರತಿಯನ್ನು ಲಗತ್ತಿಸತಕ್ಕದ್ದು.
- ಸಂದರ್ಶನದ ದಿನಾಂಕ ಮತ್ತು ಸಮಯವನ್ನು ಹಾಗೂ ಇದಕ್ಕೆ ಸಂಬಂಧಿಸಿದ ಇನ್ನಿತರೆ ಮಾಹಿತಿಯನ್ನು ವಿಶ್ವವಿದ್ಯಾಲಯದ ಜಾಲತಾಣದಲ್ಲಿ (www.vskub.ac.in) ಪ್ರಕಟಿಸಲಾಗುವುದು, ಅಭ್ಯರ್ಥಿಗಳು ವಿಶ್ವವಿದ್ಯಾಲಯದ ವೆಬ್‌ಸೈಟ್ ಗಮನಿಸಲು ತಿಳಿಸಲಾಗಿದೆ. ಸಂದರ್ಶನಕ್ಕಾಗಿ ವಿಶ್ವವಿದ್ಯಾಲಯದಿಂದ ಯಾವುದೇ ಭತ್ಯೆಗಳನ್ನು ನೀಡಲಾಗುವುದಿಲ್ಲ.
- 2025-26ನೇ ಶೈಕ್ಷಣಿಕ ಸಾಲಿನಲ್ಲಿ ತೃತೀಯ ಲಿಂಗಿ ಅಭ್ಯರ್ಥಿಗಳು ಅತಿಥಿ ಉಪನ್ಯಾಸಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.
- ಸಾಮಾನ್ಯ ಅಭ್ಯರ್ಥಿಗಳಿಗೆ ರೂ. 500/- ಹಾಗೂ ಪ.ಜಾ/ಪ.ಪಂ, ಪ್ರವರ್ಗ-01 ಅಭ್ಯರ್ಥಿಗಳಿಗೆ ರೂ. 250/- ಅರ್ಜಿಶುಲ್ಕ ನಿಗದಿಪಡಿಸಲಾಗಿದೆ. ಸದರಿ ಅಭ್ಯರ್ಥಿಗಳು ತಮ್ಮ ಪ್ರವರ್ಗವಾರು ಮೂಲ ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ಲಗತ್ತಿಸಿದ್ದಲ್ಲಿ ಮಾತ್ರ ಮೀಸಲಾತಿಗೆ ಅರ್ಹರಿರುತ್ತಾರೆ ಹಾಗೂ ಸಂದರ್ಶನದ ವೇಳೆ ಸಂಬಂಧಿಸಿದ ಎಲ್ಲಾ ಮೂಲ ಜಾತಿ ಪ್ರಮಾಣ ಪತ್ರವನ್ನು ಪರಿಶೀಲಿಸಲಾಗುವುದು.
- ಅರ್ಜಿಯೊಂದಿಗೆ ಮೇಲ್ಕಂಡ ಎಲ್ಲಾ ದಾಖಲೆಗಳನ್ನು ದಿನಾಂಕ: 29.09.2025ರ ಒಳಗಾಗಿ ವಿಶ್ವವಿದ್ಯಾಲಯದ ಮುಖ್ಯ ಆವರಣ, ಬಳ್ಳಾರಿಯಲ್ಲಿ ವಿಭಾಗದ ಮುಖ್ಯಸ್ಥರ ಕಛೇರಿಗೆ ಖುದ್ದಾಗಿ/ರಿಜಿಸ್ಟರ್ಡ್ ಅಂಚೆ ಮುಖಾಂತರ ಸಲ್ಲಿಸತಕ್ಕದ್ದು.
- ಅಂಚೆಸೇವೆಯಲ್ಲಿ ವಿಳಂಬವಾದಲ್ಲಿ ವಿಶ್ವವಿದ್ಯಾಲಯವು ಜವಾಬ್ದಾರರಾಗುವುದಿಲ್ಲ.

- ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಆಯ್ಕೆ ಪ್ರಕ್ರಿಯೆಯು ಪ್ರಸ್ತುತ ಜಾರಿಯಲ್ಲಿರುವ ಸರಕಾರದ ನಿಯಮಾವಳಿಗಳನ್ವಯ ಅರ್ಹತೆ (ಮೆರಿಟ್) ಹಾಗೂ ಮೀಸಲಾತಿ ಆಧಾರದ ಮೇಲೆ ನೇಮಕಾತಿಗೆ ಪರಿಗಣಿಸಲಾಗುವುದು.
- ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಿರುವ ಎಲ್ಲಾ ದಾಖಲೆಗಳ ಮೂಲ ದಾಖಲೆಗಳನ್ನು ತರತಕ್ಕದ್ದು/ ಸಂದರ್ಶನದ ವೇಳೆ ಅರ್ಜಿಯೊಂದಿಗೆ ಲಗತ್ತಿಸಿದ ಎಲ್ಲ ದಾಖಲೆಗಳನ್ನು ಪರಿಶೀಲಿಸಲಾಗುವುದು.
- ಆಯ್ಕೆಯಾದ ಅಭ್ಯರ್ಥಿಗಳು ಸಲ್ಲಿಸಿರುವ ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲಿಸಿ ತಾತ್ಕಾಲಿಕ ಆದೇಶ ನೀಡಲಾಗುವುದು.
- ಪೂರ್ಣಕಾಲಿಕ ಸೇವೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯಾವುದೇ ಶೈಕ್ಷಣಿಕ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿಲ್ಲ ಹಾಗೂ ವ್ಯಾಸಂಗ ಮಾಡುತ್ತಿಲ್ಲ ಎಂಬುದರ ಬಗ್ಗೆ ದೃಢಿಕರಣ ಸಲ್ಲಿಸುವುದು.
- ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ವಿಭಾಗದ ನಿರ್ದೇಶಕರು/ಮುಖ್ಯಸ್ಥರು/ಸಂಯೋಜಕರು ನೀಡುವ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಕೆಲಸಗಳನ್ನು ನಿಷ್ಠೆಯಿಂದ ಕಡ್ಡಾಯವಾಗಿ ಪಾಲಿಸುವುದು.
- ವಿಶ್ವವಿದ್ಯಾಲಯವು ನಡೆಸುವ ಉಪನ್ಯಾಸಕಠ ತಾತ್ಕಾಲಿಕ ನೇಮಕದ ಸಂದರ್ಶನವು ವಿಶ್ವವಿದ್ಯಾಲಯದ ವಿವೇಚನೆಗೆ ಒಳಪಟ್ಟಿರುತ್ತದೆ.
- ಅಭ್ಯರ್ಥಿಗಳು ಯಾವುದೇ ತರಹದ ವಿದ್ಯಾರ್ಹತೆ ಹೊಂದಿದ್ದರು ಅವುಗಳ ಪ್ರಮಾಣ ಪತ್ರವನ್ನು ಕೊನೆಯ ದಿನಾಂಕದ ಒಳಗಾಗಿ ಸಲ್ಲಿಸತಕ್ಕದು, ತದನಂತರ ಸಲ್ಲಿಸಲು ಯಾವುದೇ ಪ್ರಮಾಣ ಪತ್ರಗಳು ಅಂಗೀಕರಿಸಲಾಗುವುದಿಲ್ಲ.
- ಪೂರ್ಣಕಾಲಿಕ/ಅರೆಕಾಲಿಕ ಖಾಲಿ ಸ್ಥಾನಗಳು ಬದಲಾವಣೆಗೆ ಒಳಪಟ್ಟಿರುತ್ತವೆ.

ಕುಲಸಚಿವರು
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ,
ಬಳ್ಳಾರಿ

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ-ಕಾರ್ಯದರ್ಶಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
2. ಕುಲಸಚಿವರು (ಮೌಲ್ಯಮಾಪನ), ವಿಶ್ರೀಕೃ, ವಿಶ್ವವಿದ್ಯಾಲಯ, ಬಳ್ಳಾರಿ.
3. ಹಣಕಾಸು ಅಧಿಕಾರಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
4. ನಿರ್ದೇಶಕರು, ವಿ.ಶ್ರೀ.ಕೃ. ವಿಶ್ವವಿಶ್ವವಿದ್ಯಾಲಯ, ಸ್ನಾತಕೋತ್ತರ ಕೇಂದ್ರ, ನಂದಿಹಳ್ಳಿ.
5. ಎಲ್ಲಾ ಸ್ನಾತಕೋತ್ತರ ವಿಭಾಗಗಳು ಮುಖ್ಯಸ್ಥರುಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
6. ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ಘಟಕ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ – ಇವರಿಗೆ ವಿಶ್ವವಿದ್ಯಾಲಯದ ಜಾಲತಾಣದಲ್ಲಿ ಪ್ರಕಟಿಸಲು ಸೂಚಿಸಿದೆ.
7. ಕಛೇರಿ ಪ್ರತಿ.